RNU AIR DHARWAD

**October 9, 2023**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

ಮುಖ್ಯಾಂಶಗಳು

- ಪ್ರಾಣಿ ಮತ್ತು ಮನುಷ್ಯರ ಸಹ ಜೀವನದಿಂದ ಪರಿಸರ ಸಮತೋಲನ ಸಾಧ್ಯ– ಮುಖ್ಯಮಂತ್ರಿ ಸಿದ್ದರಾಮಯ್ಯ.

- ಅಗ್ನಿ ಅನಾಹುತ ನಿಯಂತ್ರಣಾ ನಿಯಮಗಳ ಪಾಲನೆ ಬಗ್ಗೆ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ– ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.

- ಬಳ್ಳಾರಿ ಜಿಲ್ಲೆಯಲ್ಲಿ ಕಾರ್ಮಿಕರ ಇಎಸ್ಐ ಆಸ್ಪತ್ರೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ–ಸಚಿವ ಸಂತೋಷ ಲಾಡ.

- ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಬರ ಪೀಡಿತ ಪ್ರದೇಶಗಳಿಗೆ ನಿನ್ನೆ ಭೇಟಿ ನೀಡಿದ ಕೇಂದ್ರದ ಬರ ಅಧ್ಯಯನ ತಂಡ.

*******

ಪ್ರಾಣಿ ಮತ್ತು ಮನುಷ್ಯರ ಸಹ ಜೀವನ ಇದ್ದಾಗ ಪರಿಸರ ಸಮತೋಲನ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಅರಣ್ಯ ಮತ್ತು ಪರಿಸರ ಇಲಾಖೆ ಮೈಸೂರಿನಲ್ಲಿ ಆಯೋಜಿಸಿದ್ದ 69 ನೇ ವನ್ಯಜೀವಿ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಆದರೆ ಮನುಷ್ಯನ ದುರಾಸೆಯಿಂದ ಅರಣ್ಯ ನಾಶ ಆಗುತ್ತಿದೆ. ಪ್ರತಿಶತ 33 ರಷ್ಟು ಅರಣ್ಯ ಇದ್ದರೆ ಮಾತ್ರ ಪರಿಸರದಲ್ಲಿ ಸಮತೋಲನ ಇರುತ್ತದೆ ಎಂದರು.

ರಾಜ್ಯದಲ್ಲಿ ಪ್ರತಿಶತ 22 ರಷ್ಟಾದರೂ ಅರಣ್ಯ ಉಳಿದಿರುವುದಕ್ಕೆ ಬುಡಕಟ್ಟು ಸಮುದಾಯದವರು, ಕಿರಿಯ ಅರಣ್ಯ ಸಹಾಯಕರು, ಕಾವಾಡಿಗರು, ಮಾವುತರು ಮತ್ತು ಕೆಳ ಹಂತಹ ಅರಣ್ಯ ಇಲಾಖೆ ಸಿಬ್ಬಂದಿಯ ಕಾಳಜಿ ಹಾಗೂ ಶ್ರಮ ಕಾರಣ ಎಂದು ಮುಖ್ಯಮಂತ್ರಿ ಮೆಚ್ಚುಗೆ ಸೂಚಿಸಿದರು.

ಅರಣ್ಯ ರಕ್ಷಣೆ ಕೇವಲ ಸರ್ಕಾರದ ಜವಾಬ್ದಾರಿ ಅಲ್ಲ. ಅದು ಪರಿಸರದಲ್ಲಿರುವ ಪ್ರತಿಯೊಬ್ಬರ ಕರ್ತವ್ಯ. ಆನೆ ಮತ್ತು ಮಾನವ ಸಂಘರ್ಷ ತಪ್ಪಿಸಲು ರೈಲು ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಹೇಳಿದರು.

*******

ಇಸ್ರೇಲ್ ಮತ್ತು ಪೆಲೆಸ್ತೀನ್‌ನ ಹಮಾಸ್ ಭಯೋತ್ಪಾದಕರ ನಡುವೆ ಕದನ ನಡೆಯುತ್ತಿರುವ ಹಿನ್ನೆಲ, ಇಸ್ರೇಲ್‌ನಲ್ಲಿರುವ ಕನ್ನಡಿಗರಿಗಾಗಿ ರಾಜ್ಯ ಸರ್ಕಾರ ಸಹಾಯವಾಣಿ ಆರಂಭಿಸಿದೆ.

ಯಾವುದೇ ಸಹಾಯದ ಅಗತ್ಯವಿದ್ದಲ್ಲಿ ಕೇಂದ್ರದ ಸಹಾಯವಾಣಿ ಸಂಖ್ಯೆ 080-222340676 ಮತ್ತು 080-22253707 ಗೆ ಸಂಪರ್ಕಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

*******

ಬೆಂಗಳೂರು ನಗರ ಜಿಲ್ಲೆಯ ಅತ್ತಿಬೆಲೆ ಪಟಾಕಿ ದುರಂತ ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ್ದಾರೆ.

ಘಟನಾ ಸ್ಥಳಕ್ಕೆ ನಿನ್ನೆ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೃತರ ಕುಟುಂಬಕ್ಕೆ ತಲಾ 5 ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು. ಹಾಗೂ ಗಾಯಗೊಂಡವರ ಚಿಕಿತ್ಸಾ ವೆಚ್ಚವನ್ನು ಸರ್ಕಾರ ಭರಿಸಲಿದೆ ಎಂದರು.

ದುರಂತದಲ್ಲಿ 14 ಮಂದಿ ಮೃತಪಟ್ಟಿದ್ದು, ಎಲ್ಲರೂ ತಮಿಳುನಾಡಿನ ಕೃಷ್ಣಗಿರಿ ಮತ್ತು ಧರ್ಮಪುರಿಯವರು. ಈ ಮಧ್ಯೆ ತಮಿಳುನಾಡು ಸರ್ಕಾರ ಮೃತರ ಕುಟುಂಬಗಳಿಗೆ ತಲಾ 3 ಲಕ್ಷ ರೂಪಾಯಿ ಪರಿಹಾರ ಘೋಷಿಸಿದೆ.

*******

ದೀಪಾವಳಿ ಸಮೀಪಿಸುತ್ತಿರುವ ಹಿನ್ನೆಲೆ, ರಾಜ್ಯಾದ್ಯಂತ ಪಟಾಕಿ ಅಂಗಡಿಗಳು, ಗೋದಾಮುಗಳಲ್ಲಿ ಅಗ್ನಿಅನಾಹುತ ನಿಯಂತ್ರಣಾ ನಿಯಮಗಳ ಪಾಲನೆ ಬಗ್ಗೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ತಿಳಿಸಿದ್ದಾರೆ.

ಆನೇಕಲ್ ತಾಲ್ಲೂಕು ಅತ್ತಿಬೆಲೆಯ ಪಟಾಕಿ ಸಂಗ್ರಹಾಗಾರದಲ್ಲಿ ನಡೆದಿರುವ ಅಗ್ನಿದುರಂತದ ಸ್ಥಳಕ್ಕೆ ನಿನ್ನೆ ಭೇಟಿ ನೀಡಿ ಮಾತನಾಡಿದ ಅವರು, ಪಟಾಕಿ ಗೋದಾಮಿನಲ್ಲಿ ಮುನ್ನೆಚ್ಚರಿಕೆ ಹಾಗೂ ಸುರಕ್ಷತಾ ಕ್ರಮಗಳನ್ನು ಕೈಗೊಂಡಿದ್ದರೆ ಎನ್ನುವುದನ್ನು ಪರಿಶೀಲಿಸಿದ ನಂತರ ಕ್ರಮ ಕೈಗೊಳ್ಳಲಾಗುವುದು ಎಂದರು.

ಮೃತರ ಕುಟುಂಬಗಳಿಗೆ ತಲಾ 5 ಲಕ್ಷ ರೂಪಾಯಿ ಪರಿಹಾರವನ್ನು ಉಪ ಮುಖ್ಯಮಂತ್ರಿ ಘೋಷಿಸಿದರು.

*******

ಕಾನೂನಿನನ್ವಯ ಸರ್ಕಾರದ ಎಲ್ಲಾ ಸೌಲಭ್ಯಗಳನ್ನು ಕಾರ್ಮಿಕರಿಗೆ ಒದಗಿಸುವ ಮೂಲಕ ಅವರ ಹಿತರಕ್ಷಣೆಗೆ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ ಹೇಳಿದ್ದಾರೆ.

ಬಳ್ಳಾರಿಯಲ್ಲಿ ನಿನ್ನೆ ಇಲಾಖೆಯ ಹಿರಿಯ ಅಧಿಕಾರಿಗಳ ಹಾಗೂ ಸ್ಥಳೀಯ ಜನಪ್ರತಿನಿಧಿಗಳ ಸಭೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿ ಜಿಲ್ಲೆಯಲ್ಲಿ ಬಹುದಿನದ ಬೇಡಿಕೆಯಾದ ಕಾರ್ಮಿಕರ ಇಎಸ್‌ಐ ಆಸ್ಪತ್ರೆ ನಿರ್ಮಾಣಕ್ಕೆ ಸ್ಥಳ ಗುರುತಿಸಲಾಗಿದ್ದು. ಆಸ್ಪತ್ರೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ಕಾರ್ಮಿಕರ ಕಾಯ್ದೆ ಅನ್ವಯ ಕಾರ್ಮಿಕರಿಗೆ ಇರುವ ನಿಯಮಾವಳಿಗಳನ್ನು ಫಲಕಗಳಲ್ಲಿ ಪ್ರದರ್ಶಿಸಬೇಕು.ಮೂರು ತಿಂಗಳಿಗೊಮ್ಮೆ ಕಾರ್ಮಿಕರಿಗೆ ನೀಡುವ ಸೌಲಭ್ಯಗಳ ಕುರಿತು, ಖುದ್ದು ಅಧಿಕಾರಿಗಳು ಭೇಟಿ ನೀಡಿ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

*******

ಅರಣ್ಯ ಪ್ರದೇಶ ಹೆಚ್ಚಿಸುವ ನಿಟ್ಟಿನಲ್ಲಿ ಮುಂದಿನ ವರ್ಷ 10 ಕೋಟಿ ಸಸಿ ನೆಡುವ ಗುರಿ ಹೊಂದಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ ಸಚಿವ ಈಶ್ವರ್ ಖಂಡ್ರೆ ಹೇಳಿದ್ದಾರೆ.

ಮೈಸೂರಿನಲ್ಲಿ ನಿನ್ನೆ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಪ್ರಕೃತಿ ಪರಿಸರ ಇದ್ದರೆ ನಾವು ಬದುಕಲು ಸಾಧ್ಯ. ಪರಿಸರದ ಏರುಪೇರಿನಿಂದ ಹವಾಮಾನ ಬದಲಾವಣೆ ಆಗುತ್ತಿದೆ. ಕೆಲವು ಕಡೆ ಹೆಚ್ಚು ಮಳೆ, ಕೆಲವು ಕಡೆ ಬರ ಉಂಟಾಗುತ್ತದೆ. ಇದಕ್ಕೆ ಕಾರಣ ಅರಣ್ಯ ನಾಶ. ನಮ್ಮಲ್ಲಿ ಶೇಕಡಾ 22 ರಷ್ಟು ಮಾತ್ರ ಅರಣ್ಯ ಪ್ರದೇಶ ಇದ್ದು ಇದನ್ನು ಶೇಕಡಾ 33 ಕೆ ಹೆಚ್ಚಿಸಬೇಕಿದೆ ಎಂದರು.

ಇದೇ ಉದ್ದೇಶದಿಂದ ರಾಜ್ಯದಲ್ಲಿ ಈ ವರ್ಷ 5 ಕೋಟಿ ಸಸಿ ನೆಟ್ಟು ಬೆಳೆಸಲಾಗುತ್ತಿದೆ. ಇದರಲ್ಲಿ ಕನಿಷ್ಟ 90 ರಷ್ಟು ಬದುಕಬೇಕು. ಮುಂದಿನ ವರ್ಷ 10 ಕೋಟಿ ಸಸಿ ನೆಡುವ ಗುರಿ ನಿಗದಿಪಡಿಸಿಕೊಳ್ಳಲಾಗಿದೆ ಎಂದು ಸಚಿವರು ಹೇಳಿದರು.

*******

ದೆಹಲಿಯಲ್ಲಿ ನಡೆಯಲಿರುವ ಎಐಸಿಸಿ ಕಾರ್ಯಕಾರಿ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗವಹಿಸುತ್ತಿರುವುದರಿಂದ ಇಂದು ಬೆಂಗಳೂರಿನಲ್ಲಿ ನಡೆಸಲು ಉದ್ದೇಶಿಸಿದ್ದ ಜನತಾ ದರ್ಶನ ಕಾರ್ಯಕ್ರಮ ಮುಂದೂಡಲಾಗಿದೆ.

ಜನತಾ ದರ್ಶನದ ಮುಂದಿನ ದಿನಾಂಕವನ್ನು ಸದ್ಯದಲ್ಲೇ ತಿಳಿಸಲಾಗುವುದು. ದೂರದ ಊರುಗಳಿಂದ ಜನರು ಬೆಂಗಳೂರಿಗೆ ಹೊರಡದಂತೆ ಮುಖ್ಯಮಂತ್ರಿ ಕಚೇರಿ ಅಧಿಕೃತ ಪ್ರಕಟಣೆ ತಿಳಿಸಿದೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಬರ ಪೀಡಿತ ಪ್ರದೇಶಗಳಿಗೆ ಕೇಂದ್ರದ ಬರ ಅಧ್ಯಯನ ತಂಡ ನಿನ್ನೆ ಭೇಟಿ ಪರಿಶೀಲನೆ ನಡೆಸಿತು.

ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ವಿಶ್ವನಾಥಪುರ, ಬ್ಯಾಡರಹಳ್ಳಿ, ಆವತಿ, ದೊಡ್ಡಬಳ್ಳಾಪುರ ತಾಲ್ಲೂಕಿನ ಓಬದೇನಹಳ್ಳಿ, ಕೊಳೂರು, ಹೊನ್ನಾಘಟ್ಟ ಗ್ರಾಮಗಳಿಗೆ ತಂಡದ ಸದಸ್ಯರು ಭೇಟಿ ನೀಡಿ, ರೈತರು, ಕಂದಾಯ ಇಲಾಖೆ ಹಾಗೂ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಮಾಹಿತಿ ಪಡೆದರು.

ಕೇಂದ್ರ ಜಲ ಆಯೋಗದ ನಿರ್ದೇಶಕ ಅಶೋಕ್ ಕುಮಾರ್ ವಿ.ಎಂ.ಎನ್.ಸಿ.ಎಫ್.ಸಿ ಯ ಉಪನಿರ್ದೇಶಕ ಕರಣ್ ಚೌಧರಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧೀನ ಕಾರ್ಯದರ್ಶಿ ಸಂಗೀತ್ ಕುಮಾರ್, ರಾಜ್ಯ ಪ್ರಕೃತಿ ವಿಕೋಪ ನಿರ್ವಹಣಾ ಕೇಂದ್ರದ ಹಿರಿಯ ಸಲಹೆಗಾರರಾದ ಡಾ.ಜಿ.ಎಸ್ ಶ್ರೀನಿವಾಸ ರೆಡ್ಡಿ ತಂಡದಲ್ಲಿದ್ದರು.

*******

ಕ್ರೀಡೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನೇಕ ಯೋಜನೆಗಳನ್ನು ರೂಪಿಸಿ, ಅನುಷ್ಠಾನಗೊಳಿಸುತ್ತಿವೆ. ಇದರ ಪರಿಣಾಮವಾಗಿ ದೇಶದಲ್ಲಿ ಕ್ರೀಡೆಯ ಮಟ್ಟ ಸುಧಾರಿಸಿದೆ ಎಂದು ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಹೇಳಿದ್ದಾರೆ.

ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ 62 ನೇ ಓಪನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಅಡಿಯಲ್ಲಿ ಆಯೋಜಿಸಲಾಗಿರುವ ಬೆಂಗಳೂರು ಮ್ಯಾರಥಾನ್ ಉದ್ಘಾಟಿಸಿ ಮಾತನಾಡಿದ ಅವರು, ಆಟಗಾರರು ಅವುಗಳ ಲಾಭ ಪಡೆಯುತ್ತಿದ್ದಾರೆ. ಅದರ ಫಲಿತಾಂಶ ಇಂದು ನಮ್ಮೆಲ್ಲರ ಮುಂದಿದೆ ಎಂದರು.

ಭಾರತ ಒಲಿಂಪಿಕ್ಸ್, ಕಾಮನ್‌ವೆಲ್ತ್ ಕ್ರೀಡಾಕೂಟ ಹಾಗೂ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡಾ ಸ್ಪರ್ಧೆಗಳಲ್ಲಿ ಉತ್ತಮ ಪ್ರದರ್ಶನ ನೀಡಿದೆ. 19 ನೇ ಏಷ್ಯನ್ ಗೇಮ್ಸ್‌ನಲ್ಲಿ ಭಾರತೀಯ ಆಟಗಾರರು ತಮ್ಮ ದಾಖಲೆ ಮುರಿದ ಪ್ರದರ್ಶನದ ಮೂಲಕ ದೇಶಕ್ಕೆ ಹೆಮ್ಮೆ ತಂದಿದ್ದಾರೆ ಎಂದು ರಾಜ್ಯಪಾಲರು ಶ್ಲಾಘಿಸಿದರು.

*******

ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕನ್ನು, ಕೇಂದ್ರ ಸರ್ಕಾರದ ನೀತಿ ಆಯೋಗ ಹಿಂದುಳಿದ ತಾಲ್ಲೂಕನ್ನಾಗಿ ಗುರುತಿಸಿದ್ದು, ತಾಲ್ಲೂಕು ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಹೇಳಿದ್ದಾರೆ.

ವಡಗೇರಾದಲ್ಲಿ ನಿನ್ನೆ ನಡೆದ ಕೃಷಿ ಮಹೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಸಾಮಾಜಿಕ, ಆರ್ಥಿಕ ಹಿನ್ನೆಲೆಯಲ್ಲಿ ತಾಲೂಕನ್ನು ಆಯೋಗ ಹಿಂದುಳಿದ ತಾಲೂಕಾಗಿ ಗುರುತಿಸಿದೆ. ಆರೋಗ್ಯ, ಶಿಕ್ಷಣ, ಕೃಷಿ ಹಾಗೂ ಇನ್ನಿತರ 9 ಅಂಶಗಳಡಿ ವಡಗೇರಾ ತಾಲ್ಲೂಕನ್ನು ಅಭಿವೃದ್ಧಿ ಪಡಿಸಬೇಕಾಗಿದೆ ಎಂದರು.

ಸರ್ಕಾರ ರೈತರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಅವುಗಳನ್ನು ಸದ್ಬಳಕೆ ಮಾಡಿಕೊಂಡು ಕೃಷಿ ಕ್ಷೇತ್ರದಲ್ಲಿ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಅವರು ಹೇಳಿದರು.

*******

ಇಂದಿನಿಂದ 14 ರವರೆಗೆ ಜಿಲ್ಲೆಯಲ್ಲಿ ಆಯೋಜಿಸಿರುವ ಮೂರನೇ ಸುತ್ತಿನ ಮಿಷನ್ ಇಂದ್ರ ಧನುಷ್ 5.0 ಲಸಿಕಾ ಅಭಿಯಾನವನ್ನು ಸಂಪೂರ್ಣ ಯಶಸ್ವಿಗೊಳಿಸುವಂತೆ ಉತ್ತರ ಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ರಾಷ್ಟ್ರೀಯ ಲಸಿಕಾ ವೇಳಾ ಪಟ್ಟಿಯನ್ವಯ 5 ವರ್ಷದೊಳಗಿನ ಮಕ್ಕಳು ಮತ್ತು ಗರ್ಭಿಣಿಯರಿಗೆ ನಿಗಧಿತ ಅವಧಿಯಲ್ಲಿ ನೀಡಬೇಕಾದ ಎಲ್ಲಾ ಲಸಿಕೆಗಳನ್ನು ತಪ್ಪದೇ ನೀಡಬೇಕು. ಯಾವುದೇ ಗರ್ಭಿಣಿ ಮತ್ತು ಮಗು ಲಸಿಕೆಯಿಂದ ವಂಚಿತರಾಗದಂತೆ ಹಾಗೂ ಈಗಾಗಲೇ ಲಸಿಕೆ ವಂಚಿತರಾಗಿರುವವರನ್ನು ಗುರುತಿಸಿ ಲಸಿಕೆ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಗರ್ಭಿಣಿಯರು ಮತ್ತು ಮಕ್ಕಳಲ್ಲಿ ವಿಶೇಷವಾಗಿ ರುಬೆಲ್ಲಾ ಲಸಿಕೆ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಈ ಲಸಿಕೆಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಸೂಚನೆ ನೀಡಿದ್ದಾರೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ಗದಗ ಜಿಲ್ಲೆಯ ಪ್ರತಿ ಗ್ರಾಮ ಪಂಚಾಯತ್‌ಗಳಲ್ಲಿ ಮನ್ರೇಗಾ ಯೋಜನೆಯ 2024-25 ನೇ ಕಾರ್ಮಿಕ ಆಯವ್ಯಯ ತಯಾರಿಸುವ ಕಾರ್ಯಕ್ರಮ ಪ್ರಾರಂಭವಾಗಿದ್ದು, ಅಕ್ಟೋಬರ್ 31 ಕ್ಕೆ ಮುಕ್ತಾಯಗೊಳ್ಳಲಿದೆ ಎಂದು ಗದಗ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಾವೇರಿ ಜಿಲ್ಲೆ ಬ್ಯಾಡಗಿ ತಾಲ್ಲೂಕು ಕ್ರೀಡಾಂಗಣದಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಪ್ರಸಕ್ತ ಸಾಲಿನ

**ಬೆಳಗಾವಿ ವಿಭಾಗ ಮಟ್ಟದ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿ ನಡೆಯಲಿದೆ. ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ ಹಾವೇರಿಯಲ್ಲಿ ನಿನ್ನೆ ಈ ವಿಷಯ ತಿಳಿಸಿದ್ದಾರೆ.**

**ಚಾಮರಾಜನಗರ ಜಿಲ್ಲಾ ವಿಕಲಚೇತನರ ಕಲ್ಯಾಣ ಇಲಾಖೆ ವತಿಯಿಂದ 2022-23 ನೇ ಸಾಲಿನಡಿ ವಿಶೇಷಚೇತನ ಫಲಾನುಭವಿಗಳಿಗೆ ತ್ರಿಚಕ್ರ ವಾಹನ ಹಾಗೂ ಇತರೆ ಸಾಧನಾ ಸಲಕರಣೆಗಳನ್ನು ಶಾಸಕ ಸಿ.ಪುಟ್ಟರಂಗಶೆಟ್ಟಿ ನಿನ್ನೆ ವಿತರಿಸಿದರು.**

**********